ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 20ನೇ ಫೆಬ್ರವರಿ, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು 2014ನೇ ಸಾಲಿನ ಸಮಿತಿಯ ನಾಲ್ಕನೇ ವರದಿಯನ್ನು ಒಪ್ಪಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

2014-15ನೇ ಸಾಲಿನ ಆಯವ್ಯಯದ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ.

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ವಿನಯ ಕುಲಕರ್ಣಿ ಅವರು ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿ-4ರಲ್ಲಿ ಮೋಟಾರು ವಾಹನ ಕಾಯ್ದೆ ಉಲ್ಲಂಘನೆಯಾಗುತ್ತಿರುವುದರಿಂದ ಮತ್ತು ರಾಷ್ಟ್ರೀಯ ಹೆದ್ದಾರಿ ದುರಸ್ತಿ ವೇಳೆಯಲ್ಲಿ ಯಾವುದೇ ಎಚ್ಚರಿಕೆ ಸೂಚನಾ ಫಲಕಗಳನ್ನು ಅಳವಡಿಸದಿರುವುದರಿಂದ ಉಂಟಾಗುತ್ತಿರುವ ಅನಾಹುತಗಳ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

2. ಶ್ರೀ ಅಶೋಕ ಖೇಣಿ ಅವರು ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ 124 ಗ್ರಾಮಗಳಲ್ಲಿ ಅಗತ್ಯ ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸದಿರುವುದು ಹಾಗೂ ನೈರ್ಮಲ್ಯ ಕಾರ್ಯಕ್ರಮವನ್ನು ಚಾಲ್ತಿಯಲ್ಲಿರುವ ಕಿರುನೀರು ಸರಬರಾಜು ಯೋಜನೆಗೆ ಜೋಡಣೆ ಮಾಡದಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

ಮು..ತಿ.ನೋ.,.

3. ಶ್ರೀ ಡಿ. ನಾಗರಾಜಯ್ಯ ಅವರು ರಾಜ್ಯದ ಅರಣ್ಯ ಪ್ರದೇಶದಲ್ಲಿ ಜಲಸಂರಕ್ಷಣೆಗೆ ತಡೆಗೋಡೆ ನಿರ್ಮಿಸಿ ಅಂತರ್ಜಲ ವೃದ್ಧಿಸಲು ಕಾಮಗಾರಿಯನ್ನು ಕೈಗೆತ್ತಿಗೊಳ್ಳದಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಆರ್. ನಾರಾಯಣಗೌಡ ಅವರು ಬೆಂಗಳೂರು ವೈದ್ಯಕೀಯ ಮಹಾವಿಶ್ವವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯು ಶುಶ್ರೂಷಕರ ಹುದ್ದೆಗಳಿಗೆ 2012ರಲ್ಲಿ ಸಂದರ್ಶನ ನಡೆದಿದ್ದರೂ ಇದುವರೆಗೂ ಆಯ್ಕೆ ಪಟ್ಟಿ ಪ್ರಕಟಿಸದಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀಯುತರುಗಳಾದ ಹೆಚ್.ಡಿ. ರೇವಣ್ಣ, ಕೆ.ಎಂ.ಶಿವಲಿಂಗೇಗೌಡ ಮತ್ತು ಎಂ.ಟಿ. ಕೃಷ್ಣಪ್ಪ ಅವರುಗಳು ರಾಜ್ಯದ ಕೆ.ಆರ್.ಡಿ.ಸಿ.ಎಲ್ ವತಿಯಿಂದ ಚಿಕ್ಕನಾಯಕನಹಳ್ಳಿ –ಹಾಸನ ಮಾರ್ಗದ ತಿಪಟೂರು-ಗಂಡಸಿ-ದುದ್ದ ರಸ್ತೆಯನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದಿಂದ ಟೋಲ್ ಸಂಗ್ರಹಿಸಿ ಅಭಿವೃದ್ಧಿಪಡಿಸುವ ಯೋಜನೆಯ ಕಾಮಗಾರಿಯು ಪೂರ್ಣಗೊಳ್ಳದೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

6. ಶ್ರೀ ಈ. ತುಕಾರಾಂ ಮತ್ತು ಶ್ರೀ ಬಿ.ಆರ್. ಪಾಟೀಲ್ ಅವರುಗಳು ರಾಜ್ಯದಲ್ಲಿನ ವಿವಿಧ ಜಿಲ್ಲೆಗಳ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಶಿಕ್ಷಕರನ್ನು ಖಾಯಂ/ವಿಲೀನಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7. ಶ್ರೀ ಸಿ.ಬಿ. ಸುರೇಶ್‌ಬಾಬು ಅವರು ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕೇಂದ್ರ ಸರ್ಕಾರದ ಸ್ವಾಮ್ಯದ ಕೆಐಓಸಿಎಲ್ ರವರು ಕಬ್ಬಿಣ ಮತ್ತು ಸ್ಟೀಲ್ ಪ್ಲಾಂಟ್ ಸ್ಥಾಪಿಸಲು ಉದ್ದೇಶಿಸಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8. ಶ್ರೀ ಯು.ಬಿ.ಬಣಕಾರ ಅವರು ಹಿರೇಕೆರೂರ ತಾಲ್ಲೂಕಿನಲ್ಲಿ ಪ್ರತಿಯೊಂದು ಗ್ರಾಮಗಳಲ್ಲಿನ ಅಂಗಡಿಗಳಲ್ಲಿ ಮದ್ಯ ಮಾರಾಟ ಮಾಡುತ್ತಿರುವ ಹಾಗೂ ಕೋಡ ಗ್ರಾಮದಲ್ಲಿ ಅಬಕಾರಿ ನಿಯಮ ಉಲ್ಲಂಘಿಸಿ ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ಮಾನ್ಯ ಅಬಕಾರಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಎಲ್. ಎ. ರವಿ ಸುಬ್ರಮಣ್ಯ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಆಸ್ಪತ್ರೆಗಳಲ್ಲಿ ಎಂ.ಆರ್.ಐ ಯಂತ್ರದ ಸೌಲಭ್ಯಗಳು ಸಾರ್ವಜನಿಕರಿಗೆ ತುರ್ತು ಸಂದರ್ಭಗಳಲ್ಲಿ ಲಭ್ಯವಿಲ್ಲದಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಪು..ತಿ.ನೋ.,.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಮಧು ಎಸ್. ಬಂಗಾರಪ್ಪ, ಎನ್.ಹೆಚ್.ಕೋನರೆಡ್ಡಿ ಬಿ.ಬಿ.ನಿಂಗಯ್ಯ, ಹಾಗೂ ಎಂ.ಟಿ.ಕೃಷ್ಣಪ್ಪ ಅವರುಗಳು ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂದು ಕೇಂದ್ರ ಸರ್ಕಾರ ವರದಿ ಸಲ್ಲಿಸಿರುವ ಬಗ್ಗೆ ರಾಜ್ಯ ಸರ್ಕಾರವು ತೆಗೆದುಕೊಳ್ಳುವ ನಿರ್ಣಯದ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಕೆ.ಶಿವಮೂರ್ತಿ, ಕೆ.ಎಂ.ತಿಮ್ಮರಾಯಪ್ಪ, ಎಸ್.ತಿಪ್ಪೇಸ್ವಾಮಿ, ಭೀಮನಾಯ್ಕ್, ರಾಜಣ್ಣ, ಈ. ತುಕಾರಾಂ ಮತ್ತು ಇತರರು ಬಯಲು ಸೀಮೆ ಪ್ರದೇಶಗಳಿಗೆ ಕುಡಿಯುವ ನೀರನ್ನು ಪೂರೈಸಲು ಕೆರೆಗಳಿಗೆ ನೀರು ತುಂಬಿಸುವ ಹಾಗೂ ನೀರಾವರಿ ಶುದ್ಧೀಕರಣ ಘಟಕವನ್ನು ಸ್ಥಾಪಿಸುವ ಬಗ್ಗೆ ಮತ್ತು ಬಯಲು ಸೀಮೆ ಪ್ರದೇಶದಿಂದ ಗುಳೆ ಹೋಗುವವರನ್ನು ತಡೆಗಟ್ಟುವ ವಿಷಯದ ಬಗ್ಗೆ ಚರ್ಚೆ.

6. ಖಾಸಗಿ ಸದಸ್ಯರ ಕಾರ್ಯಕಲಾಪಗಳು

1. **ಶ್ರೀ ಕೆ.ಗೋಪಾಲಯ್ಯ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.**

"ರಾಜ್ಯದಿಂದ ಪ್ರತಿವರ್ಷ ಸಾವಿರಾರು ಪ್ರಕರಣಗಳು ಅಂತಿಮ ನ್ಯಾಯಕ್ಕಾಗಿ ಮಾನ್ಯ ಸರ್ವೋಚ್ಛ ನ್ಯಾಯಾಲಯ, ನವದೆಹಲಿಗೆ ಹೋಗುತ್ತಿದ್ದು, ಇದಕ್ಕಾಗಿ ಕಕ್ಷಿದಾರರು ಲಕ್ಷಾಂತರ ರೂಪಾಯಿಗಳನ್ನು ಖರ್ಚು ಮಾಡಿಕೊಂಡು ತಮ್ಮ ಪ್ರಕರಣವನ್ನು ಜರುಗಿಸಬೇಕಾಗಿರುತ್ತದೆ. ಆದುದರಿಂದ ಬೆಂಗಳೂರಿನಲ್ಲಿ ಸರ್ವೋಚ್ಛ ನ್ಯಾಯಾಲಯದ ಪೀಠವನ್ನು ಸ್ಥಾಪಿಸಲು ಈಗಾಗಲೇ ಸಂಸದೀಯ ಸಮಿತಿ ಶಿಫಾರಸ್ಸು ಮಾಡಿರುವುದರಿಂದ ಹಾಗೂ ಬೆಂಗಳೂರಿನಲ್ಲಿ ಎಲ್ಲಾ ಮೂಲ ಸೌಕರ್ಯಗಳಿರುವುದರಿಂದ **"ಬೆಂಗಳೂರಿನಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯ ಪೀಠವನ್ನು ಸ್ಥಾಪಿಸುವ ಕುರಿತು"** ಈ ಸದನವು ನಿರ್ಣಯಿಸುತ್ತದೆ."

2. ***ಶ್ರೀ ಅಪ್ಪಾಜಿ ನಾಡಗೌಡ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

"ಭಾರತ ಸಂವಿಧಾನದ ಕಲಂ "371 ಜೆ"ಗೆ ತಿದ್ದುಪಡಿ ಮಾಡಿ ಹೈದ್ರಾಬಾದ್-ಕರ್ನಾಟಕ ಭಾಗದ ಅತ್ಯಂತ ಹಿಂದುಳಿದ ಜಿಲ್ಲೆಗಳಾದ ಗುಲ್ಬರ್ಗಾ, ರಾಯಚೂರು, ಬೀದರ್, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಿಗೆ ವಿಶೇಷ ಸ್ಥಾನಮಾನವನ್ನು ನೀಡಿರುವಂತೆ ಅದೇ ಭಾಗಕ್ಕೆ ಹೊಂದಿಕೊಂಡಿರುವ ಮತ್ತು ಅತೀ ಹಿಂದುಳಿದ ಜಿಲ್ಲೆಯಾದ **"ಬಿಜಾಪುರ ಜಿಲ್ಲೆಯನ್ನು ಸಹ ಸಂವಿಧಾನದ ಕಲಂ "371 ಜೆ" ರಡಿ ಸೇರ್ಪಡಿಸಿ ವಿಶೇಷ ಸ್ಥಾನಮಾನ** ನೀಡುವಂತೆ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಈ ಸದನವು ನಿರ್ಣಯಿಸುತ್ತದೆ."

ಮು..ತಿ.ನೋ.,.

3. ***ಶ್ರೀ ಪಿ.ಎಂ. ನರೇಂದ್ರಸ್ವಾಮಿ ಮತ್ತು ಶ್ರೀ ಗುರು ಪಾಟೀಲ್ ಶಿರವಾಳ ಅವರು ಈ ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

i) "ಗಣಿಗಾರಿಕೆಗೆ ಸಂಬಂಧಪಟ್ಟಂತೆ ಅಲಾಟ್‌ಮೆಂಟ್ Minor and Major Mining activities ಸಂಬಂಧಪಟ್ಟಂತೆ ಇಲಾಖೆಯವರು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದವರಿಗೆ ಮೀಸಲಾತಿ ನಿಯಮದಂತೆ ಯಾವ ಅವಕಾಶವನ್ನು ಕಲ್ಪಿಸಿಕೊಡಬೇಕಾಗಿತ್ತೋ ಆ ಅವಕಾಶವನ್ನು ಕಲ್ಪಿಸಿಲ್ಲದಿರುವುದರಿಂದ ಈ ವರ್ಗದ ಜನರು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಮುಂದೆ ಬರಲು ಸಂವಿಧಾನದಲ್ಲಿ ಯಾವ ರೀತಿಯ ಅವಕಾಶವನ್ನು ಈ ವರ್ಗದ ಜನರಿಗೆ ಕಲ್ಪಿಸಿಕೊಡಬೇಕೆಂದು ಹೇಳಲಾಗಿದೆಯೋ ಅದನ್ನು ಚಾಚೂತಪ್ಪದೇ ಪಾಲಿಸುವ ಕುರಿತು ಈ ಸದನವು ನಿರ್ಣಯಿಸುತ್ತದೆ."

ii) "ಇಡೀ ರಾಜ್ಯದಲ್ಲಿ ಮದ್ಯವನ್ನು ಮಾರುವುದಕ್ಕಾಗಿ ಅಬಕಾರಿ ಇಲಾಖೆಯು ಸಿ.ಎಲ್-2 ಪರವಾನಗಿಯನ್ನು ಕೊಡುತ್ತಿದ್ದು 1991 ರಿಂದ ಮೀಸಲಾತಿ ನಿಯಮವನ್ನು ಪಾಲಿಸಿಲ್ಲದಿರುವುದರ ಜೊತೆಗೆ 2011ರ ಜನಗಣತಿ ಪ್ರಕಾರ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಜನಸಂಖ್ಯೆಯು ಕೂಡ ಹೆಚ್ಚಾಗಿರುವುದರಿಂದ ಹೆಚ್ಚಾದ ಜನಸಂಖ್ಯೆಗನುಗುಣವಾಗಿ ಮೀಸಲಾತಿ ನಿಯಮಗಳನ್ನು ಪಾಲನೆ ಮಾಡಿ 1500 ಪರವಾನಗಿಗಳನ್ನು ಈ ವರ್ಗದ ಜನಾಂಗದವರಿಗೆ ಮಂಜೂರು ಮಾಡುವ" ಕುರಿತು ಈ ಸದನವು ನಿರ್ಣಯಿಸುತ್ತದೆ."

iii) "ಸರ್ಕಾರವು ಹೊರಗುತ್ತಿಗೆ, ಅರೆಸರ್ಕಾರಿ ಹಾಗೂ ಅತಿಥಿ ಹುದ್ದೆಗಳು ಎನ್ನುವ ವಿವಿಧ ಹೆಸರಿನಡಿಯಲ್ಲಿ ಹಲವಾರು ಹುದ್ದೆಗಳನ್ನು ಭರ್ತಿಮಾಡಿಕೊಳ್ಳುತ್ತಿದ್ದು ಇದು ಸಂವಿಧಾನ ಬಾಹಿರವಾಗಿರುತ್ತದೆ. 45 ದಿವಸಗಳಿಗಿಂತಲೂ ಹೆಚ್ಚಿನ ಅವಧಿಗೆ ತುಂಬಿಕೊಳ್ಳುವ ಯಾವುದೇ ರೀತಿಯ ನೇಮಕಾತಿಯಲ್ಲಿಯೂ ಮೀಸಲಾತಿ ನಿಯಮವನ್ನು ಸಂವಿಧಾನದ ಪ್ರಕಾರ ಪಾಲಿಸಬೇಕಾಗುತ್ತದೆ. ಆದುದರಿಂದ ಸರ್ಕಾರವು ಹೊರಗುತ್ತಿಗೆ ಅರೆಸರ್ಕಾರಿ ಹಾಗೂ ಅತಿಥಿ ಹುದ್ದೆಗಳು ಎಂದು ಹಲವಾರು ರೀತಿಯ ಹುದ್ದೆಗಳನ್ನು ಭರ್ತಿ ಮಾಡುವಾಗ ಮೀಸಲಾತಿ ನಿಯಮಗಳನ್ನು ಚಾಚೂ ತಪ್ಪದೆ ಪಾಲಿಸಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದ ಜನಾಂಗದವರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಒತ್ತಾಯಪೂರ್ವಕವಾಗಿ ಈ ಸದನವು ನಿರ್ಣಯಿಸುತ್ತದೆ."

4. ***ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ ಮಾನ್ಯ ಉಪ ಸಭಾಧ್ಯಕ್ಷರು ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

"ನಿಗಮಿತ ಸಾಮಾಜಿಕ ಹೊಣೆಗಾರಿಕೆ ಚಟುವಟಿಕೆಗಳ (CSR activities) ಪೈಕಿ ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಸಂಬಂಧಪಟ್ಟ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿ ಚಟುವಟಿಕೆಗಳ ಸಲುವಾಗಿ ಸಾರ್ವಜನಿಕ ಉದ್ದಿಮೆಗಳು/ಕಂಪನಿಗಳು/ರಾಜ್ಯ ಸರ್ಕಾರಿ ಸ್ವಾಮ್ಯದ ಉದ್ದಿಮೆಗಳು/ಖಾಸಗಿ ಕಂಪನಿಗಳು ಪ್ರತಿ ವರ್ಷ ತಮ್ಮ ಲಾಭದ ಅಂಶದಲ್ಲಿ ಒಂದು ಪಾಲಿನ ಕೊಡುಗೆ"ಯನ್ನು ನೀಡುವ ಕುರಿತು ಈ ಸದನವು ನಿರ್ಣಯಿಸುತ್ತದೆ."

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N